ನಾಗಮಂಗಲ ತಾಲ್ಲೂಕಿನ ಬೆಂಡಿಗನವಿಲೆ ಗ್ರಾಮದ ಹೆರಿಗೆ ಆಸ್ಪತ್ರೆ ಕಟ್ಟಡ ನಿರ್ಮಾಣ

942 (1584) ಶ್ರೀ ಚಲುವಾರಾಯ ಸ್ವಾಮಿ ಎನ್. (ನಾಗಮಂಗಲ): ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1. ನಾಗಮಂಗಲ ತಾಲ್ಲೂಕಿನ ಬೆಂಡಿಗನವಿಲೆ ಗ್ರಾಮದ ಹೆರಿಗೆ ಆಸ್ಪತ್ರೆಯ ಕಟ್ಟಡ ನಿರ್ಮಾಣ ಸಂಪೂರ್ಣವಾಗಿ ಎರಡು ವರ್ಷ ಕಳೆದಿದ್ದರೂ ಸಾರ್ವಜನಿಕ ಸೇವೆಗೆ ಅನುವು ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದ್ದರೂ ಸಹ ಸರ್ಕಾರ ವಿಳಂಬ ನೀತಿ ಅನುಸರಿಸಲು ಕಾರಣವೇನು;

2. ನಾಗಮಂಗಲ ತಾಲ್ಲೂಕಿನಲ್ಲಿ ಹೊಸದಾಗಿ ಪ್ರಾಥಮಿಕ ಆರೋಗ್ಯ ಘಟಕಗಳನ್ನು ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಪ್ರಾರಂಭಿಸುವ ಯೋಚನೆ ಇದೆಯೇ; ವಿವರಣೆ ನೀಡುವುದು;

3. ಹಾಗಿದ್ದಲ್ಲಿ ರಾಜ್ಯದಲ್ಲಿ ಎಷ್ಟು ತಾಲ್ಲೂಕುಗಳಲ್ಲಿ ಹೊಸದಾಗಿ ರೆಡ್ ಕ್ರಾಸ್ ಸಂಸ್ಥೆ ತೆರೆಯಲಾಗಿದೆ; ವಿವರಣೆ ನೀಡುವುದು; ಮತ್ತು ನಾಮಂಗಲ ತಾಲ್ಲೂಕಿನಲ್ಲಿ ಈ ಸಂಸ್ಥೆ ತೆರೆಯಲು ಪ್ರಸ್ತಾವನೆಯೇನಾದರೂ ಸರ್ಕಾರದ ಮುಂದೆ ಇದೆಯೇ?

ಶ್ರೀ ಕಾಗೋಡು ತಿಮ್ಮಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

1. ನಾಗಮಂಗಲ ತಾಲ್ಲೂಕಿನ ಬೆಂಡಿಗನವಿಲೆ ಹೆರಿಗೆ ಆಸ್ಪತ್ರೆ ಕಟ್ಟಡದಲ್ಲಿ ಕೆಲವು ನ್ಯೂನತೆಗಳು ಇದ್ದು, ಸದರಿ ನ್ಯೂನ್ಯತೆಗಳನ್ನು ಸರಿಪಡಿಸಿ, ಕಟ್ಟಡಗಳನ್ನು ಇಲಾಖೆಯ ವಶಕ್ಕೆ ಹಸ್ತಾಂತರಿಸುವಂತೆ ಕಾರ್ಯಪಾಲಕ ಇಂಜೀನಿಯರಿಂಗ್ ವಿಭಾಗ ಮಂಡ್ಯ ಇವರಿಗೆ ಸೂಚಿಸಲಾಗಿದೆ.

2. ನಾಗಮಂಗಲ ತಾಲ್ಲೂಕಿನ ಗ್ರಾಮಾಂತರ ಜನಸಂಖ್ಯೆ 174.764 ಇದ್ದು ಭಾರತ ಸರ್ಕಾರ ಮಾರ್ಗಸೂಚಿಯ ಪ್ರಕಾರ 6 ಪ್ರಾಥಮಿಕ ಆರೋಗ್ಯ ಕೇಂದ್ರಗಳ ಅವಶ್ಯಕತೆ ಇರುತ್ತದೆ. ಆದರೆ ಈ ತಾಲ್ಲೂಕಿನಲ್ಲಿ ಈಗ 7 ಪ್ರಾಥಮಿಕ ಆರೋಗ್ಯ ಕೇಂದ್ರಗಳು ಅಸ್ತಿತ್ವದಲ್ಲಿ ಇರುತ್ತದೆ. ಆದ್ದರಿಂದ, ಹೊಸ ಪ್ರಾಥಮಿಕ ಆರೋಗ್ಯ ಕೇಂದ್ರಗಳಾಗಲೀ ಪ್ರಾಥಮಿಕ ಆರೋಗ್ಯ ಘಟಕಗಳನ್ನಾಗಲೀ ಪ್ರಾರಂಭಿಸುವ ಯೋಜನೆ ಇರುವುದಿಲ್ಲ.

3. ಈಗ ಹೊಸದಾಗಿ ರಾಜ್ಯದಲ್ಲಿ 29 ತಾಲ್ಲೂಕುಗಳಲ್ಲಿ ರೆಡ್ ಕ್ರಾಸ್ ಸಂಸ್ಥೆಯನ್ನು ತೆರೆಯಲಾಗಿದೆ. ನಾಗಮಂಗಲ ತಾಲ್ಲೂಕು ಸೇರಿದಂತೆ ರಾಜ್ಯದ ಉಳಿದ ಎಲ್ಲಾ ತಾಲ್ಲೂಕುಗಳಲ್ಲಿ ಈ ಸಂಸ್ಥೆಯನ್ನು ಪ್ರಾರಂಭಿಸುವಂತೆ ಸಂಭಧಿಸಿದ ಜಿಲ್ಲಾಧಿಕಾರಿಗಳನ್ನು ಕೋರಲಾಗಿದೆ.

ನಾಗಮಂಗಲ ತಾಲ್ಲೂಕಿನ ಹರದನಹಳ್ಳಿ ಪ್ರೌಢ ಶಾಲೆ ಹಾಗೂ ಹಿರಿಯ ಪ್ರೌಢ ಶಾಲೆಯಲ್ಲಿ ಗಣಿತ ಉಪಾಧ್ಯಯರನ್ನು ನೇಮಿಸುವುದು

943 (1585) ಶ್ರೀ ಚಲುವರಾಯ ಸ್ವಾಮಿ ಎನ್. (ನಾಗಮಂಗಲ): ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ನಾಗಮಂಗಲ ತಾಲ್ಲೂಕಿನ ಹರಪನ ಹಳ್ಳಿ ಪ್ರೌಢಶಾಲೆ ಹಾಗೂ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಖಾಲಿ ಇರುವ ಗಣಿತ ಉಪಾಧ್ಯಯರ ಹುದ್ದೆಗಳನ್ನು ಭರ್ತಿ ಮಾಡುವ ವಿಷಯ ಸರ್ಕಾರದ ಗಮನಕ್ಕೆ ಬಂದಿದ್ದರೂ ಸಹ ಕ್ರಮ ಕೈಗೊಳ್ಳದೇ ವಿಳಂಬ ಮಾಡಲು ಕಾರಣವೇನು?

ಆ) ಹರಪನಹಳ್ಳಿ ಪ್ರೌಢ ಶಾಲೆ ನಿರ್ಮಿಸಲು ಹರಪನಹಳ್ಳಿ ಗ್ರಾಮಸ್ಥರು 6 ಎಕೆರೆ ಜಮೀನನ್ನು ಸರ್ಕಾರಕ್ಕೆ ನೀಡಿದ್ದು ಹಾಗೂ ಈ ಸ್ಥಳ ಸುಮಾರು ಹಳ್ಳಿಗಳಿಗೆ ಕೇಂದ್ರ ಸ್ಥಾನವಾಗಿದ್ದು, ಶಾಲೆಕಟ್ಟಡವನ್ನು ಯಾವಾಗ ಪ್ರಾರಂಭಿಸಲಾಗುವುದು.

ಇ) ನಾಗಮಂಗಲ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಬೋಗಾದಿ ಪ್ರೌಢಶಾಲೆಗೆ ಎಸ್.ಎಸ್.ಎಲ್.ಸಿ. ಪರೀಕ್ಷಾ ಕೇಂದ್ರ ತೆರೆಯುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ? ಹಾಗಿದ್ದಲ್ಲಿ ಯಾವ ಕ್ರಮ ಕೈಗೊಳ್ಳಲಾಗುವುದು?

ಪ್ರೊ. ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು) :

ಅ) ನಾಗಮಂಗಲ ತಾ: ಹರಪನಹಳ್ಳಿ ಸರ್ಕಾರಿ ಪ್ರೌಢಶಾಲೆಯಲ್ಲಿ ಖಾಲಿ ಇರುವ ಗಣಿತ ಶಿಕ್ಷಕರ ಹುದ್ದೆಗೆ ಬೇರೆ ಶಾಲೆಯಿಂದ ಈಗಾಗಲೇ ತಾತ್ಕಾಲಿಕವಾಗಿ ಶಿಕ್ಷಕರನ್ನು ನಿಯೋಜನೆ ಮಾಡಲಾಗಿದೆ. ಸದ್ಯದಲ್ಲಿ ಖಾಲಿ ಹುದ್ದೆಯನ್ನು ನೇರ ನೇಮಕಾತಿ ಮೂಲಕ ಅಥವಾ ವರ್ಗಾವಣೆಯಿಂದ ಭರ್ತಿ ಮಾಡಲಾಗುವುದು.

2. ಹಿರಿಯ ಪ್ರಾಥಮಿಕ ಶಾಲೆಯಲ್ಲಿ 62 ವಿದ್ಯಾರ್ಥಿಗಳಿದ್ದು 3 ಜನ ಶಿಕ್ಷಕರಿರುತ್ತಾರೆ. ಹಾಗೂ ಒಂದು ಹುದ್ದೆ ಖಾಲಿ ಇರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆ. ಮಕ್ಕಳ ಸಂಖ್ಯೆಗೆ ಅನುಗುಣವಾಗಿ ಶಿಕ್ಷಕರು ಇರುತ್ತಾರೆ.

ಆ) ಹರಪನಹಳ್ಳಿ ಗ್ರಾಮದ ಪ್ರೌಢಶಾಲೆಯನ್ನು ನಿರ್ಮಿಸಲು ಗ್ರಾಮಸ್ಥರು 6 ಎಕರೆ ಜಮೀನನ್ನು ಸರ್ಕಾರಕ್ಕೆ ದಾನವಾಗಿ ನೀಡಿದ್ದು ಈ ಸ್ಥಳದಲ್ಲಿ ಈಗಾಗಲೆ ಸುಸಜ್ಜಿತವಾದ 8 ಕೊಠಡಿಗಳುಳ್ಳ ಕಟ್ಟಡ ನಿರ್ಮಿಸಿದ್ದು ದಿನಾಂಕ: 11-03-2001ರಿಂದ ಶಾಲೆಯು ಸ್ವಂತ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿದೆ.

ಇ) ಅಂತಹ ಯಾವ ಪ್ರಸ್ತಾವನೆಯು ಸರ್ಕಾರದ ಮುಂದಿರುವುದಿಲ್ಲ.

ಶಿವಮೊಗ್ಗ ನಗರಕ್ಕೆ ಸರ್ಕಾರಿ ಅಥವಾ ಖಾಸಗಿ ವೈದ್ಯಕೀಯ ಕಾಲೇಜು

944 (1417) ಶ್ರೀ ಹೆಚ್.ಎಂ. ಚಂದ್ರಶೇಖರಪ್ಪ (ಶಿವಮೊಗ್ಗ): ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಶಿವಮೊಗ್ಗ ನಗರಕ್ಕೆ ಹೊಸದಾಗಿ ಸರ್ಕಾರಿ ಅಥವಾ ಖಾಸಗಿ ವೈದ್ಯಕೀಯ ಕಾಲೇಜು ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ?

ಆ) ಖಾಸಗಿ ವೈದ್ಯಕೀಯ ಕಾಲೇಜು ಪ್ರಾರಂಭಿಸಲು ಅನುಮತಿ ಕೋರಿ ಸರ್ಕಾರಕ್ಕೆ ಎಷ್ಟು ಅನುಮತಿಗಳು ಬಂದಿರುತ್ತವೆ (ವಿವರ ನೀಡುವುದು)?

ಡಾ॥ ಎ.ಬಿ. ಮಾಲಕ ರೆಡ್ಡಿ (ವೈದ್ಯಕೀಯ ಶಿಕ್ಷಣ ಸಚಿವರು):

ಅ) ಕರ್ನಾಟಕ ಉಚ್ಚ ನ್ಯಾಯಾಲಯದ ನಿರ್ದೇಶನುಸಾರ ಶರಾವತಿ ಶಿಕ್ಷಣ ಸಂಘದ ಅರ್ಜಿಯು ಪುನರ್ ಪರಿಶೀಲನೆಯಲ್ಲಿದೆ.

ಆ) ಯಾವುದು ಇಲ್ಲ (2002-2003ನೇ ಸಾಲಿನಲ್ಲಿ)

ರಾಜ್ಯದ ಪ್ರಮುಖ ಸರ್ಕಾರಿ ಆಸ್ಪತ್ರೆಗಳಲ್ಲಿ ಸೂಪರ್ ಸ್ಪೆಷಾಲಿಟಿ ಸೌಲಭ್ಯ

952 (1170) ಶ್ರೀ ದಿನೇಶ್ ಗುಂಡುರಾವ್ (ಗಾಂಧಿನಗರ): ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದ ಪ್ರಮುಖ ಪಟ್ಟಣಗಳಲ್ಲಿ ಸಾಕಷ್ಟು ಸ್ಥಳಾವಕಾಶವಿರುವ ಸರ್ಕಾರಿ ಆಸ್ಪತ್ರೆಗಳಲ್ಲಿ ಸಾಮಾನ್ಯ ಜನತೆಗಾಗಿ ಸೂಪರ್ ಸ್ಪೆಷಾಲಿಟಿ ಚಿಕಿತ್ಸಾ ಸೌಲಭ್ಯದ ಅಗತ್ಯವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಹೃದಯ, ಕಿಡ್ನಿ ಇತ್ಯಾದಿ ಪ್ರಮುಖ ಕಾಯಿಲೆಗಳಿಗೆ ಉತ್ತಮ ಚಿಕಿತ್ಸಾ ವ್ಯವಸ್ಥೆ ಹಾಗೂ ತಂಡವನ್ನು ಹೊಂದಿರುವ ಪ್ರಮುಖ ಖಾಸಗಿ ತಂಡವನ್ನು ಹೊಂದಿರುವ ಪ್ರಮುಖ ಖಾಸಗಿ ಆಸ್ಪತ್ರೆಗಳ ಹಾಗೂ ದಾನಿಗಳ ಸಹಯೋಗದೊಂದಿಗೆ ಇಂತಹ ಸೌಲಭ್ಯಗಳನ್ನು ಕಲ್ಪಿಸಲು ಸರ್ಕಾರ ಪರಿಶೀಲಿಸುವುದೇ;

ಇ) ಖಾಸಗಿ ಸಹಭಾಗಿತ್ವದಲ್ಲಿ ಆರಂಭಿಸಲಾಗುವ ಇಂತಹ ಸೌಲಭ್ಯಗಳಲ್ಲಿ ಬಡ : ಮಧ್ಯಮ ವರ್ಗದ ಜನರಿಗೆ ರಿಯಾಯಿತಿ ದರದಲ್ಲಿ ಚಿಕಿತ್ಸೆ ನೀಡುವುದನ್ನು ಸರ್ಕಾರ ಪರಿಗಣಿಸುವುದೇ?